# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಸೋಮವಾರ, ೧೬, ಮಾರ್ಚ್, ೨೦೨೬(ಫಾಲ್ಗುಣ, ೨೫, ಶಕವರ್ಷ, ೧೯೪೭)<br>BENGALURU, MONDAY, 16, MARCH, 2026(PHALGUNA, 25, SHAKAVARSHA, 1947) | ನಂ. ೨೧೦<br>No. 210 |
|---|---|---|

**ಕರ್ನಾಟಕಸರ್ಕಾರ**

ಸಂಖ್ಯೆ: ಹೆಚ್‌ಡಿ 01 ಸಿಎನ್‌ಎ 2026

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಡಾ: ಬಿ. ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ :13.03.2026.

### ಅಧಿಸೂಚನೆ

ಕರ್ನಾಟಕ ಸಿನಿಮಾ (ನಿಯಂತ್ರಣ) ನಿಯಮಗಳು, 2014 ರ ಕೆಲವೊಂದು ನಿಯಮಗಳಿಗೆ ತಿದ್ದುಪಡಿ ಮಾಡಲು ಕರ್ನಾಟಕ ಸರ್ಕಾರವು ಪ್ರಸ್ತಾಪಿಸಿರುವ ಈ ಕೆಳಗಿನ ನಿಯಮಗಳ ಕರಡನ್ನು, ಕರ್ನಾಟಕ ಸಿನಿಮಾ (ನಿಯಂತ್ರಣ) ಕಾಯ್ದೆ, 1964 (1964 ರ ಕರ್ನಾಟಕ ಕಾಯ್ದೆ 23) ರ ಸೆಕ್ಷನ್ 19 ರ ಮೂಲಕ ನೀಡಲಾದ ಅಧಿಕಾರವನ್ನು ಚಲಾಯಿಸಲು ಪ್ರಸ್ತಾಪಿಸಲಾಗಿದೆ. ಇದನ್ನು ಸದರಿ ಕಾಯ್ದೆಯ ಸೆಕ್ಷನ್ 19 ರ ಉಪ ವಿಭಾಗ (1) ರ ಪ್ರಕಾರ, ಇದರಿಂದ ಪರಿಣಾಮ ಬೀರುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಇಲ್ಲಿ ಪ್ರಕಟಿಸಲಾಗಿದೆ ಮತ್ತು ಸದರಿ ಕರಡು ನಿಯಮಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಏಳು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವ ಮೊದಲು ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಯಾವೊಬ್ಬ ವ್ಯಕ್ತಿಯಿಂದ ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು - 560 001, ಇಲ್ಲಿಗೆ ಕಳುಹಿಸಲು ಕೋರಲಾಗಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



# ಕರಡು ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:**(1) ಈ ನಿಯಮಗಳನ್ನು ಕರ್ನಾಟಕ ಸಿನಿಮಾ (ನಿಯಂತ್ರಣ) (ತಿದ್ದುಪಡಿ) ನಿಯಮಗಳು, 2026 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅವುಗಳ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆಬರತಕ್ಕದ್ದು.

**2. ನಿಯಮ 26 ರ ತಿದ್ದುಪಡಿ**:ಕರ್ನಾಟಕ ಸಿನಿಮಾ(ನಿಯಂತ್ರಣ) ನಿಯಮಗಳು, 2014ರ ನಿಯಮ 26, ಉಪ-ನಿಯಮ (1) ರ ಖಂಡ(ಡಿ) ಯಲ್ಲಿ, "ಎಂಟು ಮೀಟರ್" ಎಂಬ ಪದಗಳಿಗೆ ಬದಲಾಗಿ "ಆರು ಮೀಟರ್" ಎಂಬ ಪದಗಳನ್ನು ಸೇರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(**ಬಿ.ಕೆ. ಭುವನೇಂದ್ರ ಕುಮಾರ್**)
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಸೆರೆಮನೆ &ಸಿನಿಮಾ)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH